ಕರ್ನಾಟಕ ಸರ್ಕಾರ

# ನೆರಿಗಾ ಗ್ರಾಮ ಪಂಚಾಯತಿ ಕಾರ್ಯಾಲಯ

## ಸರ್ಜಾಪುರ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ

ಪತ್ರ ಸಂಖ್ಯೆ: ನೆ.ಗ್ರಾ.ಪಂ/73/2025-26 ದಿನಾಂಕ:15/11/2025

**-:ನಿರಾಕ್ಷೇಪಣಾ ಪತ್ರ:-**

ಬೆಂಗಳೂರು ನಗರ ಜಿಲ್ಲೆ, ಅನೇಕಲ್ ತಾಲ್ಲೂಕು ಸರ್ಜಾಪುರ ಹೋಬಳಿ, ನೆರಿಗಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕತ್ತರಿಗುಪ್ಪೆ ಗ್ರಾಮದ ಸರ್ವೆ ನಂ 87/3, 87/6, 87/24, 87/25, 87/26, 87/27, 27/33, 87/33, 87/34 ಮತ್ತು 87/35 ಒಟ್ಟು 7-00 ಎಕರೆ 0-20 ಗುಂಟೆ, ಜಮೀನು ಇದ್ದು ಜಿಲ್ಲಾಧಿಕಾರಿಗಳ ಭೂ ಪರಿವರ್ತನಾ ಆದೇಶದಂತೆ ಅರ್ಜಿದಾರರು ವ್ಯವಸಾಯದ ಉದ್ದೇಶದಿಂದ ವಾಸದ ಉದ್ದೇಶಕ್ಕೆ ಅಭಿವೃದ್ಧಿ ಪಡಿಸಲು ನಿರಾಕ್ಷೇಪಣಾ ಪತ್ರ ಮತ್ತು ಗ್ರಾಮ ಪಂಚಾಯತಿ ವತಿಯಿಂದ ನೀರು ಸರಬರಾಜಿನ ಬಗ್ಗೆ ದೃಢೀಕರಣ ನೀಡಲು ಮಾಡಿರುವ ಮನವಿಯಂತೆ ನಮ್ಮ ಗ್ರಾಮ ಪಂಚಾಯತಿಯಿಂದ ಮೇಲ್ಕಂಡ ಸರ್ವೆ ನಂಬರುಗಳ ಜಮೀನಿಗೆ **ವಸತಿ ವಿನ್ಯಾಸ ನಕ್ಷೆ ಅನುಮೋದನೆಯನ್ನು** ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆಯಲು ನಮ್ಮದು ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದನೆಗೊಂಡ ನಕ್ಷೆಗಳನ್ನು ಪಂಚಾಯತಿಗೆ ಸಲ್ಲಿಸಿದ್ದಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ, ನೀರು ಸರಬರಾಜು ಒಳಚರಂಡಿ ವ್ಯವಸ್ಥೆ ಅಭಿವೃದ್ಧಿಪಡಿಸಿಕೊಳ್ಳಲು ಮತ್ತು ಪಂಚಾಯತಿಗೆ ಕಟ್ಟಬೇಕಾದ ವಿವಿಧ ತೆರಿಗೆಗಳನ್ನು ಸಂದಾಯ ಮಾಡಿದ ನಂತರ ಅವಶ್ಯವಿದ್ದಲ್ಲಿ ಈಗಿರುವ ನೀರಿನ ಮೂಲಗಳಿಂದ ಲಭ್ಯತೆಗನುಗುಣವಾಗಿ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದೆಂದು ಈ ಮೂಲಕ ದೃಢೀಕರಿಸಿದೆ.

ಸಕ್ಷಮ ಪ್ರಾಧಿಕಾರದ ಅನುಮೋದಿತ ನಕ್ಷೆಯಂತೆ ಉದ್ದೇಶಿತ ಕಾಮಗಾರಿಗಳು ಪೂರ್ಣಗೊಂಡ ನಂತರ ಗ್ರಾಮ ಪಂಚಾಯಿತಿಗೆ ಕಟ್ಟಬೇಕಾದ ವಿವಿಧ ತೆರಿಗೆಗಳನ್ನು ಹಾಗೂ ಕುಡಿಯುವ ನೀರಿಗೆ ಸಂಭಂದಪಟ್ಟಂತಹ ಹಣವನ್ನು ಸಂದಾಯ ಮಾಡಿದ ನಂತರ ಅವಶ್ಯವಿದ್ದಲ್ಲಿ ಈಗಿರುವ ನೀರಿನ ಮೂಲಗಳಿಂದ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದೆಂದು ಈ ಮೂಲಕ ದೃಡೀಕರಿಸುತ್ತೇವೆ. ಕುಡಿಯುವ ನೀರಿನ ಸಮಸ್ಯೆಗಳು ಉದ್ಭವಿಸಿದ್ದಲ್ಲಿ ಸರಬರಾಜಿನಲ್ಲಿ ವ್ಯತ್ಯಾಸವಾದಲ್ಲಿ ಹಾಗೂ ಸಂಪೂರ್ಣ ಸ್ಥಗಿತಗೊಳಿಸಲಾಗುವುದೆಂದು ಕೂಡ ತಿಳಿಯತಕ್ಕದ್ದು.

Kantharaj

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ನೆರಿಗಾ ಗ್ರಾಮ ಪಂಚಾಯಿತಿ
ಅನೇಕಲ್ ತಾಲ್ಲೂಕು

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ನೆರಿಗಾ ಗ್ರಾಮ ಪಂಚಾಯಿತಿ
ಆನೇಕಲ್ ತಾಲ್ಲೂಕು.